# CMRIT OPEN DAY

**Publication: Vartha Prabha**
**Date: 27-09-2021**

# ಸಿಎಂಆರ್‌ಐಟಿ ಓಪನ್ ಡೇ–2021

## ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ ಅತ್ಯಾಧುನಿಕ ಸೌಲಭ್ಯವುಳ್ಳ ಕಲಿಕಾ ವಾತಾವರಣ ವೀಕ್ಷಣೆಗೆ ಮುಕ್ತ ಅವಕಾಶ

ನಗರದ ಪ್ರತಿಷ್ಠಿತ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಸೆಪ್ಟಂಬರ್–27,28 29 ಮತ್ತು 30 ರಂದು ಓಪನ್ ಡೇ–2021 ಕಾರ್ಯಕ್ರಮ ಆಯೋಜಜಿಸುವ ಮೂಲಕ ಮಹತ್ವಾಕಾಂಕ್ಷೆಯ ಎಂಜಿನಿಯರಿಂಗ್ ಮತ್ತು ಮ್ಯಾನೇಜ್ಮೆಂಟ್ ವಿದ್ಯಾರ್ಥಿಗಳ ಅತ್ಯಾಧುನಿಕ ಕಲಿಕಾ ಪರಿಸರ ವೀಕ್ಷಣೆಗೆ ಸಿಎಂಆರ್‌ಐಟಿ ಸಮುದಾಯ ವೇದಿಕೆಯಾಗುವ ಮೂಲಕ ವಿದ್ಯಾರ್ಥಿಗಳು, ಪೋಷಕರು, ಶಿಕ್ಷಣ ತಜ್ಞರು, ಪ್ರಾಧ್ಯಾಪಕರ ಸಮಾಗಮಕ್ಕೆ ಸಾಕ್ಷಿಯಾಗಲಿದೆ.

ಈ ವಾರ್ಷಿಕ ಓಪನ್ ಡೇ–2021 ಕಾರ್ಯಕ್ರಮದಲ್ಲಿ ಎಲ್ಲರೂ ಭಾಗವಹಿಸುವ ಮೂಲಕ ಸಿಎಂಆರ್‌ಐಟಿಯ ಕಲಿಕಾ ಗುಣಮಟ್ಟ ಮತ್ತು ಅತ್ಯಾಧುನಿಕ ಸೌಲಭ್ಯಗಳನ್ನು ನೇರವಾಗಿ ವೀಕ್ಷಿಸಲು ಮತ್ತು ಕಾಲೇಜಿನ ಪ್ರಾಧ್ಯಾಪಕರು, ಶಿಕ್ಷಣ ತಜ್ಞರೊಂದಿಗೆ ಮುಕ್ತ ಸಂವಹನ ನಡಸಲು ಅವಕಾಶ ಕಲ್ಪಿಸಲಾಗಿದೆ.

ಶಿಕ್ಷಣ ಕ್ಷೇತ್ರದಲ್ಲಿ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ಪಡೆದಿರುವ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಪ್ರತಿವರ್ಷ ಓಪನ್ ಡೇ ಕಾರ್ಯಕ್ರಮ ಏರ್ಪಡಿಸುವ ಮೂಲಕ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಉತ್ಕೃಷ್ಟ ಗುಣಮಟ್ಟ ಮತ್ತು ಮೌಲ್ಯಾಧಾರಿತ ಶಿಕ್ಷಣವನ್ನು ಸಮಾಜಕ್ಕೆ ಮನವರಿಕೆ ಮಾಡಿಕೊಡುವ ಜವಾಬ್ದಾರಿಯುತ ಕೆಲಸವನ್ನು ಮಾಡುತ್ತಿದೆ. ಈ ಕಾರ್ಯಕ್ರಮದಲ್ಲಿ ಎಲ್ಲರೂ ಮುಕ್ತವಾಗಿ ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಕಾಲೇಜು ನೀಡುತ್ತಿರುವ ಕಲಿಕಾ ಸೌಲಭ್ಯಗಳನ್ನು ಮತ್ತು ವಿದ್ಯಾರ್ಥಿಗಳ ಸೃಜನಾತ್ಮಕ ಆವಿಷ್ಕಾರಗಳ ಪ್ರದರ್ಶನವನ್ನು ನೇರವಾಗಿ ವೀಕ್ಷಿಸಬಹುದು.

ಇಂದಿನ ಸ್ಪರ್ಧಾತ್ಮಕ ಜಗತ್ತಿಗೆ ಪೂರಕವಾಗಿ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ ಶೈಕ್ಷಣಿಕವಾಗಿ ಸಾಕಷ್ಟು ಪ್ರಗತಿ ಸಾಧಿಸಿದೆ. ಶೈಕ್ಷಣಿಕವಾಗಿ ಎಂಜಿನಿಯರಿಂಗ್, ಎಂಬಿಎ, ಎಂಟೆಕ್, ಪಿಎಚ್‌ಡಿ ಕಾರ್ಯಕ್ರಮಗಳನ್ನು 10 ವಿಭಾಗಗಳಲ್ಲಿ ನೀಡುತ್ತಿದ್ದು, 4000ಕ್ಕೂ ಹೆಚ್ಚು ವಿದ್ಯಾರ್ಥಿಗಳ ಕನಸುಗಳನ್ನು ಪೋಷಿಸುತ್ತಿದೆ. ಇದಕ್ಕೆ ಸಾಕ್ಷಿಯಾಗಿ ನಮ್ಮ ವಿದ್ಯಾರ್ಥಿ ಸಮುದಾಯ ಈಗಾಗಲೇ ಪ್ರಪಂಚದಾದ್ಯಂತ ಎಲ್ಲಾ ಕ್ಷೇತ್ರಗಳಲ್ಲೂ ಉದ್ಯೋಗ ಪಡೆಯುವ ಮೂಲಕ ಸಾಮಾಜಿಕ ಮತ್ತು ಆರ್ಥಿಕ ಬೇಡಿಕೆಗಳನ್ನು ಪೂರೈಸುವ ಸದೃಢ ಸಂಪನ್ಮೂಲಗಳಾಗಿ ಜಾಗತಿಕವಾಗಿ ಹೊರಹೊಮ್ಮಿದ್ದಾರೆ ಎಂದು ಹೇಳಲು ಹೆಮ್ಮೆಯಾಗುತ್ತದೆ.

ವಿಳಾಸ:–
ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯ
132 ಎಇಸಿಎಸ್ ಲೇಔಟ್
ಐಟಿಪಿಎಲ್ ಮುಖ್ಯರಸ್ತೆ
ಬೆಂಗಳೂರು–560037

ಹೆಚ್ಚಿನ ಮಾಹಿತಿಗಾಗಿ:–

ಶ್ರೀಮತಿ ರೇವತಿ ರಾಜಶೇಖರ್ 
9845204720
ವಿಜಯ್:– –9986088183